ಪಿ.ಡಬ್ಲ್ಯೂ: 01.

ದಿನಾಂಕಃ 15-02-2019 ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀಃ ಹೆಚ್ ಕೆ ಎ ವಕೀಲರಿಂದಃ

ನಾನು ಮುಖ್ಯ ವಿಚಾರಣೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಸದರಿ ಪ್ರಮಾಣ ಪತ್ರಿಕೆಯಲ್ಲಿ ಹೇಳಿರುವ ಅಂಶಗಳನ್ನು ನಾನೇ ಹೇಳಿ ಬರೆಯಿಸಿದ್ದೇನೆ ಹಾಗೂ ಅವು ಸತ್ಯವಾಗಿರುತ್ತವೆಂದು ಪ್ರಮಾಣೀಕರಿಸುತ್ತೇನೆ. ಸದರಿ ಪ್ರಮಾಣ ಪತ್ರಿಕೆಯಲ್ಲಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಅವುಗಳನ್ನು ನಿಶಾನೆ ಗೊಳಿಸಬೇಕೆಂದು ಕೇಳಿ ಕೊಳ್ಳುತ್ತೇನೆ.

1. ಕ್ರಯ ಪತ್ರದ ದೃಢೀಕೃತ ನಕಲು ಪ್ರತಿ ನಿಪಿ1 ಎಂದು,
2. ಇಪ್ಪತ್ತು ಕೈಬರಹದ ಆರ್ ಟಿ ಸಿ ದೃಢೀಕೃತ ನಕಲು ಪ್ರತಿಗಳನ್ನು ನಿಪಿ-2 ರಿಂದ 21 ಎಂದು,
3. ಹದಿನೈದು ಆರ್ ಟಿ ಸಿ ಗಳನ್ನು ನಿಪಿ-22 ರಿಂದ ನಿಪಿ-36,
4. ಎಂ ಆರ್ ನಿಪಿ-37 ಎಂದು,
5. ನೋಟೀಸಿನ ಕಚೇರಿ ಪ್ರತಿ ನಿಪಿ-38 ಎಂದು,
6. ವಾಪಸ್ಸಾದ ಅಂಚೆ ಲಕೋಟೆ ನಿಪಿ-39 ಎಂದು, ಅದನ್ನು ತೆರೆದ ನ್ಯಾಯಾಲಯದಲ್ಲಿ ಒಡೆದು ಅದರೊಳಗಿರುವ ನೋಟೀಸನ್ನು ನಿಪಿ-39 (ಎ) ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕೆಂದು ಕೋರಿಕೊಳ್ಳುತ್ತೇನೆ

ಪಾಟೀ ಸವಾಲುಃ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.